**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ**

**ಸಿ.ಸಿ ನಂಃ 70/2012**

| **ಚಾಸಾ ಃ** | **1** | **ಪ್ರಾಸಾಃ-** | **2** |
|---|---|---|---|

| | |
|---|---|
| ಹೆಸರು | ನೀಲಮ್ಮ |
| ಗಂಡನ ಹೆಸರು | ಶಿವನಂಜಯ್ಯ |
| ವಯಸ್ಸು | 55 |
| ಉದ್ಯೋಗ | ಗೃಹಿಣಿ |
| ವಿಳಾಸ | ಗಿರೇನಹಳ್ಳಿ |

- - - - - - - - - - - - - - - - - - - - - - - - - - - - - -

**<u>ಕಲಂ 299 ದಂಡ ಪ್ರಕ್ರಿಯೆ ಸಂಹಿತೆ ಅಡಿಯಲ್ಲಿ ಸಾಕ್ಷಿ ವಿಚಾರಣೆ</u>**

**ದಿಃ29.07.2024ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

**<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ಆರೋಪಿತನ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನನ್ನ ಕತ್ತಿನಲ್ಲಿದ್ದ ಚೈನನ್ನು ಯಾರು ಪ್ರಾಣ ಬೆದರಿಕೆ ಹಾಕಿ ದೋಚಿರುವುದಿಲ್ಲ.

ನಾನು ಆರೋಪಿತನ ವಿರುದ್ದ ಯಾವುದೇ ದೂರನ್ನು ನೀಡಿಲ್ಲ. ನನಗೆ ಈಗ ತೋರಿಸಿದ ದಾಖಲೆಯಲ್ಲಿ ನನ್ನ ಹೆಬ್ಬೆಟ್ಟಿನ ಗುರುತು ಇರುತ್ತದೆ. ಆ ದಾಖಲೆಯು ದೂರಾಗಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಎಪಿಪಿ ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.**

**ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿನಾಂಕ.18.02.2011 ಕ್ಕೆ ಒಂದು ತಿಂಗಳ ಹಿಂದೆ ನಾನು ಗಿರೇನಹಳ್ಳಿಗೆ ಹೋಗುವಾಗ ಪೈಪ್‌ಲೈನ್ ರಸ್ತೆಯಲ್ಲಿ ಆರೋಪಿತರು ನನ್ನನ್ನು ಮಾತನಾಡಿಸಿ ಕತ್ತಿನಲ್ಲಿದ್ದ ಚೈನನ್ನು ಕೊಡುವಂತೆ ಕೇಳಿದಾಗ ನಾನು ನಿರಾಕರಿಸಿದ್ದಕ್ಕೆ ನಿನ್ನನ್ನು ಇಲ್ಲೇ ಸಾಯಿಸಿ ತೆಗೆದುಕೊಂಡು ಹೋಗುತ್ತೇವೆಂದು ಬೆದರಿಸಿ ನನ್ನ ಕತ್ತಿನಲ್ಲಿದ್ದ ಚಿನ್ನದ ಬಟಾಣಿ ಚೈನು ಅಂದಾಜು 23 ಗ್ರಾಂ 880 ಮಿಲಿ ಕಳವು ಮಾಡಿಕೊಂಡು ಹೋಗಿರುತ್ತಾರೆಂದು ಪೊಲೀಸರಿಗೆ ನಿಪಿ-2 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**

## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ

## ಸಿ.ಸಿ ನಂಃ 70/2012

| **ಚಾಸಾ ಃ** | **6** | **ಪ್ರಾಸಾಃ-** | **3** |
|---|---|---|---|

| | |
|---|---|
| ಹೆಸರು | ರಾಜು |
| ತಂದೆಯ ಹೆಸರು | ಚೂಡಯ್ಯ |
| ವಯಸ್ಸು | 54 |
| ಉದ್ಯೋಗ | ಗುತ್ತಿಗೆದಾರರು |
| ವಿಳಾಸ | ಹಾರೋಹಳ್ಳಿ |

- - - - - - - - - - - - - - - - - - - - - - - - - - - - - - -

**<u>ಕಲಂ 299 ದಂಡ ಪ್ರಕ್ರಿಯೆ ಸಂಹಿತೆ ಅಡಿಯಲ್ಲಿ ಸಾಕ್ಷಿ ವಿಚಾರಣೆ</u>**

**ದಿಃ29.07.2024ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

**<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ಆರೋಪಿತನ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ. ನನಗೆ ಈಗ ತೋರಿಸಿದ ಒಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ನಿಪಿ-3 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ. ಅವರಿಗೆ ನಾನು ಹೇಳಿಕೆಯನ್ನು ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಎಪಿಪಿ ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.**

**ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿನಾಂಕ.05.02.2011 ರಂದು ಮಧ್ಯಾಹ್ನ 2:15 ರಿಂದ 3:00 ಗಂಟೆ ಸಮಯದಲ್ಲಿ ಘಟನಾ ಸ್ಥಳದಲ್ಲಿ ಪೋಲೀಸರು ನನ್ನ ಸಮಕ್ಷಮ ನಿಪಿ-3 ರಂತೆ ಪಂಚನಾಮ ಕ್ರಮ ಜರುಗಿಸಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ.05.02.2011 ರಂದು ಘಟನೆಗೆ ಸಂಬಂಧಿಸಿದಂತೆ ಪಂಚನಾಮೆ ಕುರಿತಾಗಿ ಮತ್ತು ಆರೋಪಿತರ ಗುರುತಿನ ಕುರಿತಾಗಿ ಪೋಲೀಸರಿಗೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಹೇಳಿಕೆಯನ್ನು ಓದಿ ಹೇಳಿದ್ದು, ಸಾಕ್ಷಿಯು ತನ್ನ ಹೇಳಿಕೆಯನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆ :ಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**